ಗ್ರಂಥಾಲಯ ಇಲಾಖೆಯಡಿಯಲ್ಲಿ ಖಾಲಿ ಇರುವ ಹುದ್ದೆಗಳು.

810(1195) ಶ್ರೀ ಡಿ.ವಿ. ಸದಾನಂದ ಗೌಡ (ಪುತ್ತೂರು) :— ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಂಥಾಲಯ ಇಲಾಖೆಯಡಿಯಲ್ಲಿ ಖಾಲಿ ಇರುವ ಹುದ್ದೆಗಳ ಒಟ್ಟು ಸಂಖ್ಯೆ ಎಷ್ಟು? ಅವುಗಳು ಯಾವುವು, ಅವುಗಳ ನೇಮಕಾತಿಗಳನ್ನು ಯಾವಾಗ ಮಾಡಲಾಗುವುದು?

ಆ) ತಾತ್ಕಾಲಿಕ ಮೇಲ್ವಿಚಾರಕರಾಗಿ ಕೆಲಸ ಮಾಡುವವರ ಬಗ್ಗೆ ನೇಮಕಾತಿ ಸಂದರ್ಭದಲ್ಲಿ ಆದ್ಯತೆ ಕೊಡುವ ಉದ್ದೇಶ ಸರ್ಕಾರಕ್ಕಿದೆಯೇ?

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು) :—

ಅ) ಒಟ್ಟು 80

ಆ) 1) ಮುಖ್ಯ ಗ್ರಂಥಾಲಯಾಧಿಕಾರಿಗಳು - 5

2) ಗ್ರಂಥಪಾಲಕರು - 5

3) ಗ್ರಂಥಾಲಯ ಸಹಾಯಕರು - 36

4) ಬೆರಳಚ್ಚುಗಾರರು - 05

5) ಗ್ರಂಥಾಲಯ ಸಹವರ್ತಿಗಳು - 29

ನೇಮಕಾತಿ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಸಮುದಾಯ ಶೌಚಾಲಯಗಳ ನಿರ್ಮಾಣ.

812(1196) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಒಟ್ಟು ಹಳ್ಳಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು)